2003ರ ಕನ್ನಡ ರಾಜ್ಯೋತ್ಸವದ ಪ್ರಶಸ್ತಿ ಕುರಿತು

199 (534) ಶ್ರೀ ಸುರೇಶ್ ಕುಮಾರ್ ಎಸ್ (ರಾಜಾಜಿನಗರ) ಮಾನ್ಯ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) 2003ರ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಬಂದ ಅರ್ಜಿಗಳ ಸಂಖ್ಯೆ ಎಷ್ಟು

ಆ) ಎಷ್ಟು ಮಂದಿಗೆ ಪ್ರಶಸ್ತಿಗಳನ್ನು ನೀಡಲಾಯಿತು

ಇ) ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡುವುದಕ್ಕೆ ಅಳವಡಿಸಿರುವ ಮಾನದಂಡಗಳೇನು

ಈ) ಪ್ರಶಸ್ತಿಗೆ ವ್ಯಕ್ತಿಗಳನ್ನು ಆಯ್ಕೆ ಮಾಡಲು ರಾಜ್ಯ ಸರ್ಕಾರ ಆಯ್ಕೆಯ ಸಮಿತಿ ರಚಿಸಿದೆಯೆ ಆಯ್ಕೆ ಸಮಿತಿಯ ಸದಸ್ಯರು ಯಾರು?

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು)

ಅ) 800 ಅರ್ಜಿಗಳು

ಆ) ಒಟ್ಟು 60 ಮಂದಿಗೆ ಪ್ರಶಸ್ತಿ ನೀಡಲಾಯಿತು

ಇ) ಸರ್ಕಾರದಿಂದ ರಚಿಸಲ್ಪಟ್ಟಿರುವ ಸಲಹಾ ಸಮಿತಿ ಹಾಗೂ ಸರ್ಕಾರ ರೂಪಿಸಿರುವ ನಿಯಮಗಳು ಮಾನದಂಡವಾಗಿರುತ್ತದೆ (ಅನುಬಂಧ–ಅ) ಲಗತ್ತಿಸಿದೆ

ಈ) ಹೌದು, ಸಲಹಾ ಸಮಿತಿಯ ಅಧ್ಯಕ್ಷರಾಗಿ ಸನ್ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರು, ಸದಸ್ಯರುಗಳಾಗಿ ಅಧ್ಯಕ್ಷರು ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಅಧ್ಯಕ್ಷರು, ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ, ಅಧ್ಯಕ್ಷರು, ಕರ್ನಾಟಕ ಜಾನಪದ ಮತ್ತು ಯಕ್ಷಗಾನ ಅಕಾಡೆಮಿ ಅಧ್ಯಕ್ಷರು ಕರ್ನಾಟಕ ಲಲಿತಕಲಾ ಅಕಾಡೆಮಿ, ಪ್ರಧಾನ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸದಸ್ಯ ಕಾರ್ಯದರ್ಶಿಗಳಾಗಿ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶಕರು ಇರುತ್ತಾರೆ (ಅನುಬಂಧ–ಅ ರಲ್ಲಿದ್ದಂತೆ)

ಅನುಬಂಧ – ಅ

ಸರ್ಕಾರಿ ಆದೇಶ ಸಂಖ್ಯೆ ಸಂಕಇ 66 ಕಗೌಧ 2003, ದಿನಾಂಕ 16 8 2003 ರಲ್ಲಿ 2003ನೇ ಸಾಲಿನ ರಾಜ್ಯ ಪ್ರಶಸ್ತಿ ಸಲಹಾ ಸಮಿತಿಯನ್ನು ರಚಿಸಿದ್ದು ವಿವರಗಳು ಈ ಕೆಳಕಂಡಂತಿವೆ

1	ಸನ್ಮಾನ್ಯ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು	–	ಅಧ್ಯಕ್ಷರು
2	ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ	–	ಸದಸ್ಯರು
3	ಅಧ್ಯಕ್ಷರು, ಕರ್ನಾಟಕ ಸಾಹಿತ್ಯ ಅಕಾಡೆಮಿ	–	ಸದಸ್ಯರು
4	ಅಧ್ಯಕ್ಷರು, ಕರ್ನಾಟಕ ಸಂಗೀತ ಅಕಾಡೆಮಿ	–	ಸದಸ್ಯರು
5	ಅಧ್ಯಕ್ಷರು, ಕರ್ನಾಟಕ ಜಾನಪದ ಮತ್ತು ಯಕ್ಷಗಾನ ಅಕಾಡೆಮಿ	–	ಸದಸ್ಯರು
6	ಅಧ್ಯಕ್ಷರು, ಕರ್ನಾಟಕ ಲಲಿತಕಲಾ ಅಕಾಡೆಮಿ	–	ಸದಸ್ಯರು
7	ಅಧ್ಯಕ್ಷರು, ಕರ್ನಾಟಕ ನಾಟಕ ಅಕಾಡೆಮಿ	–	ಸದಸ್ಯರು
8	ಪ್ರಧಾನ ಕಾರ್ಯದರ್ಶಿಗಳು ಕನ್ನಡ ಮತ್ತು ಸಂಸ್ಕೃತಿ ಇಲಾಖೆ	–	ಸದಸ್ಯರು
9	ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ	–	ಸದಸ್ಯ–ಕಾರ್ಯದರ್ಶಿಗಳು

ನಿಯಮಗಳು

1 ಈ ನಿಯಮಗಳು ಸರ್ಕಾರದಿಂದ ರಚಿಸಲ್ಪಟ್ಟಿರುವ ಸಲಹಾ ಸಮಿತಿಗೆ ಮಾತ್ರ ಅನ್ವಯಿಸುತ್ತದೆ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವ ವ್ಯಕ್ತಿಗಳನ್ನು ಗಮನಿಸಿ, ಪ್ರತಿವರ್ಷ ರಾಜ್ಯ ಪ್ರಶಸ್ತಿ ನೀಡಲು ಸರ್ಕಾರದಿಂದ ರಚಿಸಲ್ಪಡುವ ಸಲಹಾ ಸಮಿತಿಯ ಶಿಫಾರಸ್ಸುಗಳನ್ನು ಪಡೆದು ಅಂತಿಮವಾಗಿ ಸರ್ಕಾರ ನಿರ್ಧರಿಸುವುದು

2 ಗಣನೀಯ ಸೇವೆ ಸಲ್ಲಿಸಿರುವ ವ್ಯಕ್ತಿಗಳನ್ನು ಈ ಕೆಳಕಂಡ ಕ್ಷೇತ್ರಗಳಿಂದ ಆರಿಸಿ ಸರ್ಕಾರಕ್ಕೆ ಶಿಫಾರಸ್ಸು ಮಾಡತಕ್ಕದ್ದು –
ಸಾಹಿತ್ಯ, ಶಿಕ್ಷಣ, ಸಂಗೀತ, ನೃತ್ಯ, ಲಲಿತಕಲೆಗಳು ರಚನಾತ್ಮಕ ಕಾರ್ಯಗಳು, ಕ್ರೀಡೆ ಜಾನಪದ, ಪರಿಸರ, ವಿಜ್ಞಾನ, ವೈದ್ಯಕೀಯ, ಆಡಳಿತ ಜೊತೆಗೆ ಪ್ರತಿವರ್ಷ ಸರ್ಕಾರ ನಿರ್ಧರಿಸುವ ಇತರೆ ಕ್ಷೇತ್ರಗಳು

3 ಯಾವುದೇ ಕ್ಷೇತ್ರದಿಂದ ಯಾವುದೇ ವ್ಯಕ್ತಿಯನ್ನು ಸಲಹಾ ಸಮಿತಿ ಶಿಫಾರಸ್ಸು ಮಾಡುವ ಮುನ್ನ ಆ ವ್ಯಕ್ತಿಯ ಸಾಮಾಜಿಕ ಹಿನ್ನೆಲೆ ನಿಷ್ಕಳಂಕ ಸೇವೆ ಹಾಗೂ ಸಮಾಜದಲ್ಲಿ ಅತ್ಯಂತ ಗಣನೀಯವಾದ ಸೇವೆಗೈದವರೆಂದು ಗುರುತಿಸಲ್ಪಟ್ಟ ವ್ಯಕ್ತಿಗಳನ್ನು ಮಾತ್ರ ಶಿಫಾರಸ್ಸು ಮಾಡತಕ್ಕದ್ದು

4 ಗಣ್ಯವ್ಯಕ್ತಿಗಳ ಸಂಪೂರ್ಣ ಪರಿಚಯವನ್ನು ಸಂಗ್ರಹಿಸಿ, ಆಯಾ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆಯನ್ನು ತುಲನಾತ್ಮಕವಾಗಿ ಪರಿಶೀಲಿಸಿ ಶಿಫಾರಸ್ಸು ಮಾಡತಕ್ಕದ್ದು

5 ಪ್ರಶಸ್ತಿ ಸಂಖ್ಯೆಯನ್ನು ಅಂತಿಮವಾಗಿ ಸರ್ಕಾರ ನಿರ್ಧರಿಸುವುದು

6 ಸಮಿತಿಯ ಶಿಫಾರಸ್ಸು ಸರ್ಕಾರದ ಪರಿಶೀಲನೆ, ಮಾರ್ಪಾಟು ಮತ್ತು ಅಂತಿಮ ತೀರ್ಮಾನಕ್ಕೆ ಒಳಪಟ್ಟಿರುತ್ತದೆ

ಅನುದಾನಿತ ಖಾಸಗಿ ಪ್ರೌಢಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣ ವಿಭಾಗ ತೆರೆಯುವುದು

201 (162) ಶ್ರೀ ಸುರೇಶ್ ಬಾಬು ಸಿ ಬಿ (ಚಿಕ್ಕನಾಯಕನಹಳ್ಳಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಅನುದಾನಿತ ಖಾಸಗಿ ಪ್ರೌಢಶಾಲೆಗಳಲ್ಲಿಯೂ ಕಂಪ್ಯೂಟರ್ ಶಿಕ್ಷಣ ವಿಭಾಗ ತೆರೆಯುವ ಪ್ರಸ್ತಾವನೆ ಸರ್ಕಾರದ ಗಮನದಲ್ಲಿದೆಯೇ

ಆ) ಮುಂದಿನ ಶೈಕ್ಷಣಿಕ ವರ್ಷದಲ್ಲಿ ರಾಜ್ಯದ ಎಲ್ಲಾ ಖಾಸಗಿ ಪ್ರೌಢಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣವನ್ನು ಪ್ರಾರಂಭಿಸಲಾಗುವುದೇ?

ಪ್ರೊ॥ ಬಿ ಕೆ ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಇಲ್ಲ

ಆ) ಅಂತಹ ಪ್ರಸ್ತಾವನೆ ಸದ್ಯಕ್ಕೆ ಸರ್ಕಾರದ ಮುಂದೆ ಇಲ್ಲ

ಚಿಕ್ಕನಾಯಕನಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಹೆಚ್ಚುವರಿ ಕೊರಡಿಗಳ ಅವಶ್ಯಕತೆ

202 (163) ಶ್ರೀ ಸುರೇಶ್ ಬಾಬು ಸಿ ಬಿ (ಚಿಕ್ಕನಾಯಕನಹಳ್ಳಿ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಹೆಚ್ಚುವರಿ ಕೊರಡಿಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ